ನಂ.1 ವಿಜಯವಾಣಿ
ಕನ್ನಡ ದಿನಪತ್ರಿಕೆ
VIJAYAVANI » BENGALURU

# ಸಮಾಜ ಬದಲಾವಣೆಗೆ ಕಾನೂನು ಪದವಿ ಮುಖ್ಯ

**ಆನೇಕಲ್:** ಕಾನೂನು ಪದವಿಯು ಸಮಾಜ ಬದಲಾವಣೆಯ ನಿಟ್ಟಿನಲ್ಲಿ ಅತ್ಯಂತ ಪ್ರಮುಖವಾದ ಪದವಿಯಾಗಿದೆ. ಕಾನೂನು ವಿದ್ಯಾರ್ಥಿಗಳು ಸಮಾಜಕ್ಕೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಶೈಕ್ಷಣಿಕ ವಿಚಾರಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಉಪ ಲೋಕಾಯುಕ್ತ ಜಸ್ಟೀಸ್ ಕೆ.ಎನ್.ಫಣೀಂದ್ರ ಹೇಳಿದರು.

ಪಟ್ಟಣಕ್ಕೆ ಸಮೀಪದ ಅಲಯನ್ಸ್ ವಿಶ್ವವಿದ್ಯಾಲಯದಲ್ಲಿ ಎಲ್‌ಎಲ್‌ಬಿ ಮತ್ತು ಎಲ್‌ಎಲ್‌ಎಂ ತರಗತಿಗಳ ಪ್ರಾರಂಭೋತ್ಸವ ಮತ್ತು ಸಂವಾದ ಕಾರ್ಯಕ್ರಮವನ್ನು ಶುಕ್ರವಾರ ಉದ್ಘಾಟಿಸಿ ಮಾತನಾಡಿದರು. ಮೌಲ್ಯ ಮತ್ತು ಸಿದ್ಧಾಂತವನ್ನು ಜೀವನದಲ್ಲಿ ಅಳವಡಿಸಿಕೊಂಡು, ನ್ಯಾಯ ಮತ್ತು ಸತ್ಯದ ಪರ ನಿಲ್ಲಬೇಕು. ವೃತ್ತಿಜೀವನದಲ್ಲಿ ವಕೀಲ ವೃತ್ತಿ ಅತ್ಯಂತ ಶ್ರೇಷ್ಠ ವೃತ್ತಿಯಾಗಿದೆ. ಹಾಗಾಗಿ ಕಾನೂನು ವಿದ್ಯಾರ್ಥಿಗಳು ಸಾಮಾಜಿಕ ಮೌಲ್ಯವನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಪ್ರತಿಯೊಬ್ಬರು ಉತ್ತಮ ಆರೋಗ್ಯ ಬಯಸುತ್ತಾರೆ, ಅದೇರೀತಿ ಪ್ರತಿಯೊಬ್ಬರೂ ಉತ್ತಮ ಸಮಾಜ ನಿರ್ಮಾಣವನ್ನು ಬಯಸುವುದು ಅವರ ಜವಾಬ್ದಾರಿಯಾಗಿದೆ ಎಂದರು. ಅಲಯನ್ಸ್ ವಿವಿ ಕುಲಪತಿ ಅಭಯ್ ಚಬ್ಬಿ ಮಾತನಾಡಿ, ಅಲಯನ್ಸ್ ವಿವಿಯ ಕಾನೂನು ವಿಭಾಗವು ಕ್ರಿಯಾಶೀಲ ಮತ್ತು ವಿದ್ಯಾರ್ಥಿ ಸ್ನೇಹಿಯಾಗಿ ರೂಪಿಸಲಾಗಿದೆ. ಪದವಿಯ ಹಂತದಲ್ಲಿ ಅಣುಕು ನ್ಯಾಯಾಲಯಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಹಾಗಾಗಿ ವಿದ್ಯಾರ್ಥಿಗಳು ತಮ್ಮ ಚಟುವಟಿಕೆಗಳ ಜತೆಗೆ ಸಮಾಜವನ್ನು ಅರಿಯಬಹುದಾಗಿದೆ. ವಕೀಲ ವೃತ್ತಿಯ ಮಹತ್ವವನ್ನು ವಿದ್ಯಾರ್ಥಿಗಳಿಗೆ ತಿಳಿಸುವುದು ನಮ್ಮ ಬದ್ಧತೆ ಎಂದರು.

ವಿಜಯವಾಣಿ ಚಿತ್ರ



**ಆನೇಕಲ್ ಪಟ್ಟಣ ಸಮೀಪದ ಅಲಯನ್ಸ್ ವಿಶ್ವವಿದ್ಯಾಲಯದಲ್ಲಿ ಎಲ್‌ಎಲ್‌ಬಿ ಮತ್ತು ಎಲ್‌ಎಲ್‌ಎಂ ತರಗತಿಗಳ ಪ್ರಾರಂಭೋತ್ಸವ ಮತ್ತು ಸಂವಾದ ಕಾರ್ಯಕ್ರಮದಲ್ಲಿ ಉಪ ಲೋಕಾಯುಕ್ತ ಜಸ್ಟೀಸ್ ಕೆ.ಎನ್.ಫಣೀಂದ್ರ, ವಿವಿಯ ರೆಜಿಸ್ಟ್ರಾರ್ ಜನರಲ್ ಸುರೇಖಾ ಶೆಟ್ಟಿ, ರಿಜಿಸ್ಟ್ರಾರ್ ನಿವೇದಿತಾ ಮಿಶ್ರಾ, ಕಾನೂನು ವಿಭಾಗದ ಡೀನ್ ಡಾ.ಕಿರಣ್ ಡೆನ್ನಿಸ್ ಗಾರ್ಡನ್, ಡಾ.ಶ್ಯಾಮ್ ಕಿಶೋರ್, ಮುಕುಲ್ ಸಕ್ಸೇನಾ, ವೆಂಕಟೇಶ್ ಇದ್ದರು.**